| | ತಾಲ್ಲೂಕು | ಮಕ್ಕಳ |
|---|---|---|
| 1) | ಕೋಲಾರ | 2028 |
| 2) | ಬಂಗಾರಪೇಟೆ | 1181 |
| 3) | ಮಾಲೂರು | 935 |
| 4) | ಕೆ.ಜಿ.ಎಫ್ | 1217 |
| 5) | ಮುಳಬಾಗಿಲು | 788 |
| 6) | ಶ್ರೀನಿವಾಸಪುರ | 1235 |
| | **ಒಟ್ಟು** | **7384** |

**ಕಲಾವಿದರಿಗೆ ಮಾಸಾಶನ**

**1412(1683); ಶ್ರೀ ಮೇಟಿ ಹುಲ್ಲಪ್ಪ (ಬಾಗಲಕೋಟೆ)**

ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಎಷ್ಟು ಕಲಾವಿದರಿಗೆ ಮಾಸಾಶನ ನೀಡಲಾಗುತ್ತಿದೆ; (ಮಾಹಿತಿ ನೀಡುವುದು)

ಆ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಕಲಾವಿದರು ಮಾಸಾಶನ ಪಡೆಯಲು ನಿಗದಿಪಡಿಸಿರುವ ಮಾನದಂಡವೇನು;

ಇ) ಇನ್ನು ಎಷ್ಟು ಕಲಾವಿದರಿಗೆ ಮಾಸಾಶನ ಮಂಜೂರಾತಿ ಬಾಕಿ ಇರುತ್ತದೆ (ಕಲಾವಿದರ ಜಿಲ್ಲಾವಾರು ಪಟ್ಟಿ ನೀಡುವುದು);

ಈ) ಕಲಾವಿದರಿಗೆ ಮಾಸಾಶನ ಅಲ್ಲದೇ ಬೇರೆ ಯಾವ ಸೌಲಭ್ಯವನ್ನು ನೀಡಲಾಗುತ್ತಿದೆ?

**ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)**

ಅ) ಮಾಸಾಶನ ಪಡೆಯುತ್ತಿರುವ ಒಟ್ಟು ಕಲಾವಿದರ ಸಂಖ್ಯೆ 26265.

ಆ)

1) ಸಾಹಿತ್ಯ, ಸಂಗೀತ, ನೃತ್ಯ, ನಾಟಕ, ಜಾನಪದ ಮತ್ತು ಯಕ್ಷಗಾನ, ಲಿಖಿತಕಲೆ, ಶಿಲ್ಪಕಲೆಗಳಲ್ಲಿ 25 ವರ್ಷಗಳ ಕಾಲ ಗಣನೀಯ ಸೇವೆ ಸಲ್ಲಿಸಿದ ಕಷ್ಟಪರಿಸ್ಥಿತಿಯಲ್ಲಿರುವ ಸಾಹಿತಿ/ಕಲಾವಿದರು ಮಾಸಾಶನಕ್ಕಾಗಿ ಅರ್ಜಿ ಸಲ್ಲಿಸಬಹುದು.

2) ಕಲಾವಿದರ ವಯಸ್ಸು 58 ವರ್ಷಗಳಾಗಿರಬೇಕು.

3) ಗ್ರಾಮಾಂತರ ಪ್ರದೇಶದ ಕಲಾವಿದರಿಗೆ ವಾರ್ಷಿಕ ರೂ.40,000/– ಹಾಗೂ ಪಟ್ಟಣ ಪ್ರದೇಶದವರಿಗೆ ರೂ.50,000/–ಗಳ ಗರಿಷ್ಠ ವಾರ್ಷಿಕ ಆದಾಯ ಮಿತಿಯಲ್ಲಿರಬೇಕು.

ಇ) ಮಾಸಾಶನ ಮಂಜೂರಾತಿಗಾಗಿ ಆಯ್ಕೆ ಸಮಿತಿ ರಚಿಸಿದ್ದು, ವಿವಿಧ ಅಕಾಡೆಮಿಗಳು ಅರ್ಹ ಕಲಾವಿದರ ಪಟ್ಟಿಯನ್ನು ಆಯ್ಕೆ ಸಮಿತಿಯ ಮುಂದೆ ಸಲ್ಲಿಸಿದೆ. ಈ ಸಮಿತಿಯು ಅರ್ಹ ಕಲಾವಿದರನ್ನು ಗುರುತಿಸಿ ಮಾಸಾಶನಕ್ಕೆ ಶಿಫಾರಸ್ಸು ಮಾಡಬೇಕಿರುತ್ತದೆ.

ಈ)

1) ರಾಜ್ಯದಾದ್ಯಂತ ಮತ್ತು ಹೊರರಾಜ್ಯದಲ್ಲಿನ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಕಲಾವಿದರಿಗೆ ರೈಲ್ವೆ ರಿಯಾಯಿತಿ ಸೌಲಭ್ಯ ನೀಡಲಾಗುತ್ತಿದೆ.

2) ಸಾಹಿತ್ಯ, ಸಂಗೀತ, ನೃತ್ಯ, ನಾಟಕ, ಜಾನಪದ, ಯಕ್ಷಗಾನ, ಲಲಿತಕಲೆ, ಶಿಲ್ಪಕಲೆಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಹಿತಿ/ಕಲಾವಿದರಿಗೆ ಕಲಾವಿದರ ಗುರುತಿನ ಚೀಟಿ ಸೌಲಭ್ಯ ಮತ್ತು ವೈದ್ಯಕೀಯ ಗುರುತಿನ ಚೀಟಿ ಸೌಲಭ್ಯ ಮತ್ತು ವೈದ್ಯಕೀಯ ಗುರುತಿನ ಚೀಟಿ ನೀಡುವ ಮೂಲಕ ವೈದ್ಯಕೀಯ ನೆರವು ನೀಡಲಾಗುತ್ತಿದೆ.

3) ಅಸಂಘಟಿತ ಕಲಾವಿದರಿಗೆ ವಾದ್ಯ ಪರಿಕರ ಮತ್ತು ವೇಷಭೂಷಣ ಖರೀದಿಗೆ ಧನಸಹಾಯ ನೀಡಲಾಗುತ್ತಿದೆ.

**ಶೌಚಾಲಯಗಳ ನಿರ್ಮಾಣ**

**1413(1684); ಶ್ರೀ ಮೇಟಿ ಹುಲ್ಲಪ್ಪ ಯಮನಪ್ಪ (ಬಾಗಲಕೋಟೆ)**

ಅ) ರಾಜ್ಯದಲ್ಲಿ ಪ್ರಸಕ್ತ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಎಷ್ಟು ಶೌಚಾಲಯಗಳ ನಿರ್ಮಾಣ ಮಾಡಲಾಗಿರುತ್ತದೆ. (ಜಿಲ್ಲಾವಾರು ಮಾಹಿತಿ ನೀಡುವುದು);

ಆ) ಶೌಚಾಲಯ ನಿರ್ಮಾಣಕ್ಕೆ ನೀಡಲಾಗುತ್ತಿರುವ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅನುದಾನವೆಷ್ಟು; ಒಂದು ಶೌಚಾಲಯ ನಿರ್ಮಾಣಕ್ಕೆ ಖರ್ಚಾಗುವ ಮೊತ್ತವೆಷ್ಟು;

ಇ) ಈಗ ನೀಡಲಾಗುತ್ತಿರುವ ಅನುದಾನವು ಶೌಚಾಲಯ ಕಟ್ಟಿಸಲು ಸಾಕಾಗುತ್ತದೆಯೇ;

ಈ) ಗ್ರಾಮೀಣ ಭಾಗಗಳಲ್ಲಿ ನೀರಿನ ಸಮಸ್ಯೆ ಹೆಚ್ಚಾಗಿರುವುದರಿಂದ ಈ ಶೌಚಾಲಯಗಳಿಗೆ ನೀರಿನ ವ್ಯವಸ್ಥೆಯನ್ನು ಹೇಗೆ ಕಲ್ಪಿಸಲಾಗುವುದು;

ಉ) ಈಗಾಗಲೇ ಶೌಚಾಲಯ ಕಟ್ಟಿಸಿದಂತಹ ಗ್ರಾಮೀಣ ಭಾಗದ ಜನರಿಗೆ ಅನುದಾನವನ್ನು ಪಡೆಯಲು ಅರ್ಹರಿರುತ್ತಾರೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಎಲ್ಲಿ ಅರ್ಜಿ ಸಲ್ಲಿಸಬೇಕು (ವಿವರ ನೀಡುವುದು)?